ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

459 (530) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಸ್ಥಾಪನೆಯಾದ ಸಣ್ಣ ಕೈಗಾರಿಕೆಗಳ ಮಾಹಿತಿ ನೀಡುವುದು; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ವಿವರವನ್ನು ನೀಡುವುದು)

(ಆ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ; ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಅವರಿಗೆ ಸಾಲ ಸೌಲಭ್ಯ, ಸಹಾಯ ಧನ ನೀಡಲಾಗುತ್ತಿದೆ? (ಸಂಪೂರ್ಣ ವಿವರ ನೀಡುವುದು)